ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ : ಸಿ5(2)ಪವ್ಯಮುಂಬಡ್ತಿ/42/2022-23 ದಿನಾಂಕ:20-11-2023

ಜ್ಞಾಪನಾ

ವಿಷಯ :- ಶಾಲಾ ಶಿಕ್ಷಣ ಇಲಾಖೆಯ ಅಧೀಕ್ಷಕರುಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಗೆ ಮುಂಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಬಗ್ಗೆ.

ಉಲ್ಲೇಖ :-01.ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದಿನಾಂಕ: 29-01-2008.

02.ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

03.ಸರ್ಕಾರದ ಅದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2022 ದಿನಾಂಕ: 28-12-2022.

04.ದಿನಾಂಕ: 03-11-2023 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

05.ಈ ಕಛೇರಿಯ ಅಧಿಸೂಚನೆ ಪತ್ರದ ಸಮ ಸಂಖ್ಯೆ ದಿನಾಂಕ:17-11-2023

06.ದಿನಾಂಕ: 20-11-2023 ರಂದು ನಡೆದ ಸ್ಥಳ ಆಯ್ಕೆಯ ಕೌನ್ಸಿಲಿಂಗ್.

* * * * * *

ಶಾಲಾ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಭೋದಕೇತರ) ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ.

ಅದರಂತೆ, ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರ/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ: 03-11-2023 ರಂದು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಶಾಲಾ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 37900-70850 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 40900-78200 ರ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಗಳಿಗೆ ಉಲ್ಲೇಖ [4] ರ ಅಧಿಸೂಚನೆ ದಿನಾಂಕ: 03-11-2023 ರಲ್ಲಿ ಒಟ್ಟು 08 ನೌಕರರಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ.

ಪ್ರಸ್ತುತ, ಬೆಂಗಳೂರು ಆಯುಕ್ತಾಲಯದಲ್ಲಿ ದಿನಾಂಕ; 20-11-2023 ರ ಅಂತ್ಯಕ್ಕೆ ಉದ್ಭವಾಗಿರುವ ಖಾಲಿ ಹುದ್ದೆಗಳನ್ನು ಸೇರ್ಪಡೆ ಮಾಡಿಕೊಂಡಂತೆ 08 ಪತ್ರಾಂಕಿತ ವ್ಯವಸ್ಥಾಪಕರ/ಸಹಾಯಕ ನಿರ್ದೇಶಕರು [ಬೋಧಕೇತರ] ಹುದ್ದೆಗಳು ಖಾಲಿಯಾಗಿದ್ದು, ಬಡ್ತಿ ಹೊಂದಿದ ಅಧಿಕಾರಿಗಳಿಗೆ ದಿನಾಂಕ: 20-11-2023 ರಂದು ಸ್ಥಳ ಆಯ್ಕೆಗಾಗಿ ಕೌನ್ಸಿಲಿಂಗ್ ನಡೆಸಲಾಗಿದೆ. ಈ ಪೈಕಿ 07 ಬಡ್ತಿ ಹೊಂದಿದ ನೌಕರರು ಸ್ಥಳ ಆಯ್ಕೆ ಮಾಡಿಕೊಂಡು ಒರ್ವ ನೌಕರರು ಬಡ್ತಿಯನ್ನು ಮಂದೂಡಿರುತ್ತಾರೆ. ಅದರಂತೆ, ಈ ಕೆಳಕಂಡ 07 ಮಂದಿ ಬಡ್ತಿ ಹೊಂದಿದ ಅಧಿಕಾರಿಗಳು ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಳವನ್ನು ಆಯ್ಕೆ

ಮಾಡಿಕೊಂಡಿರುತ್ತಾರೆ. ಈ ಅಧಿಕಾರಿಗಳು ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ, ಸ್ಥಳ ನಿಯುಕ್ತಿಗೊಳಿಸಿ ಆದೇಶವನ್ನು ಹೊರಡಿಸಿದೆ. ಬಡ್ತಿ ಹೊಂದಿದ ಅಧಿಕಾರಿಗಳು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ.

ಸ್ಥಾನಪನ್ನ ಬಡ್ತಿಯನ್ನು ಹೊಂದಿರುವ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಈ ಆದೇಶ ಹೊರಡಿಸಿದ 07 ದಿನಗಳೊಳಗಾಗಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿಗಳಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ.

| ಕ್ರಸಂ | ಜೇಷ್ಠತಾ ಸಂಖ್ಯೆ | ನೌಕರರ ಹೆಸರು/ಕಛೇರಿ ವಿಳಾಸ ಶ್ರೀ / ಶ್ರೀಮತಿ | ಬಡ್ತಿ ಹುದ್ದೆಯಲ್ಲಿ ಸ್ಥಳ ಆಯ್ಕೆ ಮಾಡಿಕೊಂಡ ಕಛೇರಿ ಹೆಸರು ಮತ್ತು ವಿಳಾಸ |
|---|---|---|---|
| 01 | 492 | ಶ್ರೀ.ಕೆ.ಕೃಷ್ಣಪ್ರಸಾದ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕನಕಪುರ ತಾಲ್ಲೂಕು ರಾಮನಗರ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ |
| 02 | 494 | ಶ್ರೀ.ಬಿ.ಹೆಚ್.ಜಾವಳ್ಳಿ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ದಾವಣಗೆರೆ ಜಿಲ್ಲೆ ದಾವಣಗೆರೆ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹಿರಿಯೂರು, ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. |
| 03 | 541 | ಬಿ.ಆರ್.ಕಾಂತರಾಜು. ಅಧೀಕ್ಷಕರು. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕೆ.ಆರ್.ಪೇಟೆ ತಾಲ್ಲೂಕು ಮಂಡ್ಯ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸಕಲೇಶಪುರ ತಾಲ್ಲೂಕು, ಹಾಸನ ಜಿಲ್ಲೆ. |
| 04 | 542 | ಎಂ. ಲತಾ, ಅಧೀಕ್ಷಕರು. ಆಯುಕ್ತರ ಕಛೇರಿ. ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ |
| 05 | 543 | ಶಿವಕುಮಾರ್. ಎನ್.ಕೆ ಅಧೀಕ್ಷಕರು. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮದ್ದೂರು, ತಾಲ್ಲೂಕು ಮಂಡ್ಯ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ. |
| 06 | 544 | ಪಿ.ಮಂಜುನಾಥ, ಅಧೀಕ್ಷಕರು. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶ್ರೀನಿವಾಸಪುರ ತಾಲ್ಲೂಕು, ಕೋಲಾರ ಜಿಲ್ಲೆ. |
| 07 | 628 | ಪಿ.ಎಸ್. ನಟರಾಜು, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹೆಚ್.ಡಿ.ಕೋಟೆ ತಾಲ್ಲೂಕು ಮೈಸೂರು ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಡಿಕೇರಿ, ತಾಲ್ಲೂಕು, ಕೊಡಗು ಜಿಲ್ಲೆ |

**ಷರತ್ತುಗಳು:-**

01. ಮೇಲ್ಕಂಡ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಕ.ನಾ.ಸೇ.ನಿಯಮ 42[ಬಿ] ಅನ್ವಯ ವೇತನ ನಿಗಧಿಗೆ ಅರ್ಹರಿರುತ್ತಾರೆ.

02. ಈ ಅಧಿಕಾರಿಗಳ ಮೇಲೆ ಶಿಸ್ತು ಪ್ರಕರಣ, ಇಲಾಖಾ ವಿಚಾರಣೆ, ನ್ಯಾಯಾಂಗ ಪ್ರಕರಣ ಬಾಕಿ ಇರುವಂತಿಲ್ಲ. ಅಲ್ಲದೆ ಸರ್ಕಾರಿ ನೌಕರನ ವಿರುದ್ಧ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ಪ್ರಾರಂಭವಾಗಿ ಅಂತಹ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ದಂಡನೆಯಲ್ಲಿ ಪರ್ಯಾವಸನಗೊಂಡಿದ್ದಲ್ಲಿ, ಆ ದಂಡನೆಯು ಜಾರಿಯಲ್ಲಿರುವ ಅವಧಿಯಲ್ಲಿ ಅಂತಹ ಸರ್ಕಾರಿ ನೌಕರರಿಗೆ ಮುಂಬಡ್ತಿ ಹೊಂದಲು ಆಸ್ಪದವಿಲ್ಲವೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ. ಅಧೀಕ್ಷಕರ ಹುದ್ದೆಯಿಂದ ಬಿಡುಗಡೆ ಮಾಡುವ ಮುನ್ನ ಇದನ್ನು ಖಚಿತಪಡಿಸಿಕೊಳ್ಳುವುದು.

03. ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸ್ವತಃ ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ, ಸ್ಥಳ ಬದಲಾವಣೆಗೆ ಅವಕಾಶವಿರುವುದಿಲ್ಲ.

04. ಈ ಆದೇಶ ಹೊರಡಿಸಿದ 7 ದಿನದೊಳಗೆ ಕರ್ತವ್ಯದಿಂದ ಬಿಡುಗಡೆ ಹೊಂದಿ/ಸೇರ್ಪಡೆಗೊಳ್ಳುವುದು.

05. ಕಛೇರಿ ಮುಖ್ಯಸ್ಥರುಗಳು ಸಂಬಂಧಿಸಿದ ನೌಕರರನ್ನು ಸಕಾಲದಲ್ಲಿ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.

06. ನೌಕರರು ಸ್ಥಳ ನಿಯುಕ್ತಿಯನ್ನು ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿ ಪಡೆದಿರುವುದರಿಂದ ಯಾವುದೇ ಪ್ರಯಾಣ ಭತ್ಯೆ, ವರ್ಗಾವಣೆ ಭತ್ಯೆ ಅಥವಾ ಸೇರಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

07. ಈ ಎಲ್ಲಾ ಅಂಶಗಳನ್ನು ಕಛೇರಿ ಮುಖ್ಯಸ್ಥರು ಪರಿಶೀಲಿಸಿ, ಸ್ಥಾನಾಪನ್ನ ಬಡ್ತಿ ಬಗ್ಗೆ ಸೇವಾ ಪುಸ್ತಕದಲ್ಲಿ ನಮೂದಿಸಲು ಕ್ರಮ ವಹಿಸಿ ಈ ಕಛೇರಿಗೆ ವರದಿ ಮಾಡತಕ್ಕದ್ದು.

08. ನೌಕರರ ಬಿಡುಗಡೆ ಮತ್ತು ಸೇರ್ಪಡೆ ಬಗ್ಗೆ ತಪ್ಪದೆ ಈ ಕಛೇರಿಗೆ ವರದಿ ಸಲ್ಲಿಸುವುದು.

09. ಮೇಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಈ ಷರತ್ತುಗಳು ಪೂರೈಕೆ ಆಗದಿದ್ದಂತಹ ಅಧಿಕಾರಿಗಳನ್ನು ಸ್ಥಾನಾಪನ್ನ ಬಡ್ತಿಗೆ ಪರಿಗಣಿಸಬಾರದೆಂದು ಸ್ಪಷ್ಟಪಡಿಸಿದೆ.

20.20.6/2010

ಬಿ.ಬಿ.ಕಾವೇರಿ, ಐ.ಎ.ಎಸ್.,
ಆಯುಕ್ತರು
20/11/23

ಇವರಿಗೆ:

01. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560001.
02. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
03. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು ಇವರ ಮಾಹಿತಿಗಾಗಿ,
04. ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
05. ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ಸಂಶೋಧನೆ ತರಬೇತಿ ಇಲಾಖೆ, 100 ಅಡಿ ವರ್ತುಲ ರಸ್ತೆ, ಹೊಸಕರೆಹಳ್ಳಿ, ಬನಶಂಕರಿ, ಬೆಂಗಳೂರು.
06. ರಾಜ್ಯದ ಎಲ್ಲಾ ಶಾಲಾ ಶಿಕ್ಷಣ ಇಲಾಖಾ ನಿರ್ದೇಶಕರುಗಳಿಗೆ,
07. ನಿರ್ದೇಶಕರು [ಪರೀಕ್ಷೆಗಳು] ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
08. ವಿಭಾಗೀಯ ಸಹ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು ವಿಭಾಗ,
09. ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ,
10. ಸಂಬಂದಿಸಿದ ಎಲ್ಲಾ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪ ನಿರ್ದೇಶಕರು[ಅಭಿವೃದ್ಧಿ] ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, [ಡಯಟ್]
11. ಸಂಬಂದಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
12. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಇವರಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ಇಲಾಖಾ ವೆಬ್ ಸೈಟ್-https://schooleducation.karnataka.gov.in /kn ನಲ್ಲಿ ಪ್ರಕಟಿಸಲು ಸೂಚಿಸಿದೆ.
13. ಸಂಬಂಧಿಸಿದ ಅಧೀಕ್ಷಕರುಗಳಿಗೆ.
14. ಕಛೇರಿ ಪ್ರತಿ.